ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು) :

ಅ) ಭದ್ರಾ ಜಲಾಶಯದ ವ್ಯಾಪ್ತಿಯಲ್ಲಿ ಖಾಸಗಿ ಕಂಪನಿಯಾದ ಮೆ: ಅರುಣ್ ಇಂಜಿನಿಯರಿಂಗ್ ಪ್ರಾಜೆಕ್ಟ್ ಪ್ರೈ.ಲಿಮಿಟೆಡ್, ಬೆಂಗಳೂರು ಇವರಿಗೆ ವಿದ್ಯುತ್ ಉತ್ಪಾದನೆ ಮಾಡಲು ಅನುಮತಿ ನೀಡಲಾಗಿದೆ.

ಆ) ಸದರಿ ಸಂಸ್ಥೆಯವರಿಗೆ ಪರಿಸರ ಇಲಾಖೆಯಿಂದ ನಿರಾಕ್ಷೇಪಣ ಪತ್ರ ಪಡೆಯಲು ಇಂಧನ ಇಲಾಖೆಯು ಸೂಚಿಸಿದೆ.

ಈ ಯೋಜನೆಯನ್ನು ಭದ್ರಾ ಜಲಾಶಯದ ಎಡಭಾಗದಲ್ಲಿನ ಸ್ಯಾಡಲ್ ನಂ.1ರ ಬಲಭಾಗದ ತುದಿಯಲ್ಲಿ ನಿರ್ಮಿಸಲು ಉದ್ದೇಶಿಸಿದ್ದು ಈ ಕೆಲಸವನ್ನು ಸ್ಯಾಡಲ್ ಹಾಗೂ ಅಣೆಕಟ್ಟಿನ ಕಟ್ಟಡಗಳಿಗೆ ಯಾವುದೇ ಹಾನಿಯಾಗದಂತೆ ಮಾಡಲು ಜಲ ಸಂಪನ್ಮೂಲ ಇಲಾಖೆಯು ಷರತ್ತು ವಿಧಿಸಿದೆ.

908(1392) ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ) ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಮಾಗಡಿ ತಾಲ್ಲೂಕಿಗೆ ಹೇಮಾವತಿ ನೀರನ್ನು ತರುವ ಯೋಜನೆಯು ಯಾವ ಹಂತದಲ್ಲಿದೆ, ಇದರ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು) :

ಅ) ಹೇಮಾವತಿ ಯೋಜನೆಯ ಎಡದಂಡೆ ನಾಲೆಯ ತುಮಕೂರು ಶಾಖಾ ಕಾಲುವೆಯ 190ನೇ ಕಿ.ಮೀ.ನಲ್ಲಿ 0.60 ಟಿ.ಎಂ.ಸಿ. ನೀರನ್ನು ಏತ ನೀರಾವರಿ ಮೂಲಕ ಮಾಗಡಿ ತಾಲ್ಲೂಕು ಹಾಗೂ ಸುತ್ತಮುತ್ತಲಿನ ಕೆರೆಗಳಿಗೆ ನೀರೊದಗಿಸಲು ಶ್ರೀರಂಗ ಏತ ನೀರಾವರಿ ಯೋಜನೆಗೆ ಅಂದಾಜು ಮೊತ್ತ ರೂ. 96 ಕೋಟಿಗಳಿಗೆ ತಯಾರಿಸಲಾಗಿದ್ದು ಅನುಮೋದನೆ ನೀಡುವ ಪ್ರಸ್ತಾವನೆ ಸರ್ಕಾರದ ಮಟ್ಟದಲ್ಲಿ ಪರಿಶೀಲನೆಯಲ್ಲಿದೆ.

909(1187) ಶ್ರೀ ಭರಮಗೌಡ (ರಾಜು) ಆಲಗೌಡ ಕಾಗೆ (ಕಾಗವಾಡ) : ಮಾನ್ಯ ಜಲ ಸಂಪನ್ಮೂಲ ಹಾಗೂ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೆಳಗಾವಿ ಜಿಲ್ಲೆ, ಅಥಣಿ ತಾಲ್ಲೂಕಿನ ಹಿಪ್ಪರಗಿ ಅಣೆಕಟ್ಟಿನಲ್ಲಿ ನೀರು ನಿಲ್ಲಿಸಲಾಗಿದೆಯೇ :

ಇ) ನೀರು ನಿಲ್ಲಿಸಿದ್ದಲ್ಲಿ, ಮುಳುಗಡೆ ಪ್ರದೇಶದ ಜನರಿಗೆ ಪರಿಹಾರ ಧನವನ್ನು ನೀಡಿರುವುದೆಷ್ಟು, ಉಳಿದ ಪರಿಹಾರ ಹಣವನ್ನು ಯಾವಾಗ ನೀಡಲಾಗುವುದು :

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಹಾಗೂ ಸಾರಿಗೆ ಸಚಿವರು) :

ಅ) ಹಿಪ್ಪರಗಿ ಅಣೆಕಟ್ಟಿನಲ್ಲಿ 2004–05ನೇ ಸಾಲಿನಲ್ಲಿ ನೀರನ್ನು ನಿಲ್ಲಿಸಲಾಗಿದೆ.

ಆ) ಹಿಪ್ಪರಗಿ ಅಣೆಕಟ್ಟಿನ ಹಿನ್ನೀರಿನಿಂದ ಈವರೆಗೆ ಮುಳುಗಡೆಯಾದ ಜಮೀನು 1002 ಎಕರೆ 32 ಗುಂಟೆಗಳಿಗೆ ಇದುವರೆಗೆ ರೂ.1384 ಲಕ್ಷ ಪರಿಹಾರ ಧನವನ್ನು ವಿತರಿಸಲಾಗಿದೆ. ಬಾಕಿ ಮುಳುಗಡೆ ಕ್ಷೇತ್ರ 3096 ಎಕರೆ 35 ಗುಂಟೆಗೆ ಪರಿಹಾರ ಧನದ ಅಂದಾಜು ಮೊತ್ತ ರೂ.4590 ಲಕ್ಷಗಳಾಗುತ್ತಿದ್ದು, ಐತೀರ್ಮಗಳು ಬಂದ ನಂತರ ವಿತರಿಸಲಾಗುವುದು.